## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತಿ.ನರಸೀಪುರ

## ಸಿ.ಸಿ.621/2023

| | | | | |
|---|---|---|---|---|
| 01 | ಹೆಸರು | ಬಸವರಾಜು | ಸಿ ಡಬ್ಲೂ | 2 |
| 02 | ತಂದೆಯ ಹೆಸರು | ಮರಿಸಿದ್ದೇಗೌಡ | ಪಿಡಬ್ಲೂ | 2 |
| 03 | ವಯಸ್ಸು | 45 | ಪ್ರಮಾಣೀಕರಿಸಲಾದ ದಿನಾಂಕಃ | |
| 04 | ಉದ್ಯೋಗ | ವ್ಯವಸಾಯ | 12.01.2026 | |
| 05 | ಊರು | ಬಸವನಹಳ್ಳಿ ಗ್ರಾಮ | | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನನಗೆ ಚಾ ಸಾ 1 ಮತ್ತು 3 ರಿಂದ 11 ರವರ ಪರಿಚಯ ಇರುತ್ತದೆ. ನನಗೆ ಮೃತ ನಾಗೇಶ ರವರ ಪರಿಚಯ ಇರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಬೇರೆ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ. ನಾಗೇಶ್ ರವರು ಅಪಘಾತದಲ್ಲಿ ಮೃತಪಟ್ಟಿರುತ್ತಾರೆ. ಸದರಿ ಅಪಘಾತದ ಬಗ್ಗೆ ನನಗೆ ಮಾಹಿತಿ ಇಲ್ಲ. ಯಾರ ತಪ್ಪಿನಿಂದ ಸದರಿ ಅಪಘಾತ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಅಪಘಾತಕ್ಕೊಳಗಾದ ವಾಹನವನ್ನು ನೋಡಿದರೆ ಗುರುತಿಸಲು ಸಾಧ್ಯವಿಲ್ಲ. ಆರೋಪಿತನನ್ನು ನೋಡಿದರೆ ಗುರುತಿಸಲು ಸಾಧ್ಯವಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದೆ. ಸದರಿ ದಾಖಲೆಯು ಸ್ಥಳ ಮಹಜರು ಆಗಿದ್ದು ಅದನ್ನು ನಿ ಪಿ 2 ಎಂದು ಗುರುತಿಸಲಾಯಿತು ಮತ್ತು ಸಾಕ್ಷಿಯು ಸಹಿಯನ್ನು ನಿ ಪಿ 2(ಎ) ಎಂದು ಗುರುತಿಸಲಾಯಿತು. ನನಗೆ ನಿ ಪಿ 2 ರಲ್ಲಿ ಬರೆದಿರುವ ವಿಚಾರಗಳು ಗೊತ್ತಿಲ್ಲ. ನಾನು ನಿ ಪಿ 2 ಕ್ಕೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಪೊಲೀಸರು ನಿ ಪಿ 2 ರಂತೆ ಯಾವುದೇ ಮಹಜರು ಕ್ರಮ ಜರುಗಿಸಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಎ ಪಿ ಪಿ ರವರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ  ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ದಿಃ13.05.2023 ರಂದು ನಾನು ಮಂಡ್ಯಕ್ಕೆ ಹೋಗುವ ಉದ್ದೇಶದಿಂದ ನನ್ನ ಸ್ಕೂಟರ್ ನಲ್ಲಿ ಬಸವನಹಳ್ಳಿಯಿಂದ ಮಂಡ್ಯ ಕಡೆಗೆ ಹೋಗುತ್ತಿದ್ದಾಗ ಆರೋಪಿಯು ತನ್ನ ಹೋಂಡಾ ಆಕ್ಟೀವಾ ಸ್ಕೂಟರ್ ನೋಂದಣಿ ಸಂ.ಕೆ ಎ 11 ಇ ಯು 8000 ರಲ್ಲಿ ಹಿಂಬದಿ ಸವಾರರಾದ ಆರೋಪಿಯ ಭಾವಾನದ ನಾಗೇಶ್ ರವರನ್ನು ಕೂರಿಸಿಕೊಂಡು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡುಹೋಗಿ ಬನ್ನೂರು ಮಂಡ್ಯ ರಸ್ತೆಯಲ್ಲಿ ದಾಸೆಗೌಡನಕೊಪ್ಪಲು ಗ್ರಾಮದ ಹಟ್ಟಿ ಮಾರಮ್ಮನ ದೇವಸ್ಥಾನದ ರಸ್ತೆಯಲ್ಲಿದ್ದ ದಿಬ್ಬಗಳನ್ನು  ಗುರುತಿಸದೇ ನಿಯಂತ್ರಣ ತಪ್ಪಿ ಇಬ್ಬರೂ ಸ್ಕೂಟರ್ ಸಮೇತ  ಕೆಳಗೆ ಬಿದ್ದಿರುತ್ತಾರೆ ಎಂದರೆ ಸರಿಯಲ್ಲ.  ಆಗ ಮದ್ಯಾಹ್ನ ಸುಮಾರು 2.00 ಗಂಟೆ ಸಮಯವಾಗಿದ್ದು ನಾನು ತಕ್ಷಣ ಸ್ಕೂಟರ್ ನಿಲ್ಲಿಸಿ ಅವರ ಬಳಿ ಹೋಗಿ  ನೋಡಿದಾಗ ನಾಗೇಶ್ ರವರಿಗೆ ಮೂಗಿಗೆ, ಬಲಕಣ್ಣಿನ ಕೆಳಭಾಗಕ್ಕೆ ಬಲಭುಜಕ್ಕೆ ಎದೆಯ ಬಲ ಭಾಗಕ್ಕೆ ಬಲ ಕೈಗೆ, ಎಡಮೊಣಕೈಗೆ ರಕ್ತಗಾಯವಾಗಿ ಮತ್ತು ತಲೆಗೂ ಸಹ ಒಳಗಾಯವಾಗಿರುವ ಹಾಗೇ ಕಂಡುಬಂದಿರುತ್ತದೆ ಎಂದರೆ ಸರಿಯಲ್ಲ.

ಸದರಿ ನಾಗೇಶ್ ರವರು ಅರೆಪ್ರಜ್ಞಾವಸ್ಥೆಯಲ್ಲಿದ್ದು ಆರೋಪಿಗೆ ಯಾವುದೇ ಗಾಯವಾಗಿರುವುದಿಲ್ಲ ಎಂದರೆ ಸರಿಯಲ್ಲ.  ನಂತರ ನಾನು ಸದರಿ ವಿಚಾರವನ್ನು ಚಾ ಸಾ 1 ರವರಿಗೆ ಫೋನ್ ಕರೆ ಮಾಡಿ ತಿಳಿಸಿರುತ್ತೇನೆ ಎಂದರೆ ಸರಿಯಲ್ಲ.  ನಂತರ ಗಾಯಾಳುವನ್ನು ಅರಕೆರೆ ಗ್ರಾಮಕ್ಕೆ ಕರೆದುಕೊಂಡು ಹೋಗಿ ಪ್ರಥಮ ಚಿಕಿತ್ಸೆ ಕೊಡಿಸಿ ನಂತರ ಮಂಡ್ಯ  ಮಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದ್ದು ಮತ್ತು ಮೈಸೂರಿನ ಡಿ ಆರ್ ಎಂ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದ್ದು ಮತ್ತು ಹೆಚ್ಚಿನ ಚಿಕಿತ್ಸೆಯನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಕೊಡಿಸಿದ್ದರೂ ಸಹ ಚಿಕಿತ್ಸೆ ಫಲಕಾರಿಯಾಗದೇ ಅವರು ಮೃತಪಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

ದಿಃ 16.05.2023 ರಂದು ಚಾ ಸಾ 1 ರವರು ಪೊಲೀಸರಿಗೆ ದೂರು ಕೊಟ್ಟಿದ್ದು ಅದರಂತೆ ಪೊಲೀಸರು ದಿಃ01.08.2023 ರಂದು ನನ್ನ ಹೇಳಿಕೆಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ದಿಃ16.05.2023 ರಂದು ಚಾ ಸಾ 10 ಮತ್ತು 11 ರವರ ಸಮಕ್ಷಮ ನಾನು ತೋರಿಸಿದ ಅಪಘಾತವಾದ ಸ್ಥಳದಲ್ಲಿ ಪೊಲೀಸರು ನಿ ಪಿ 2 ರಂತೆ ಸ್ಥಳ ಮಹಜರು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ.  ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿ ಪಿ 3 ಎಂದು ಗುರುತಿಸಲಾಯಿತು.

ನಾನು ಅಪಘಾತವನ್ನು ಕಣ್ಣಾರೆ ನೋಡಿದ್ದರೂ ಸಹ ಮತ್ತು ಅಪಘಾತವಾದ ವಾಹನವನ್ನು ನಾನು ನೋಡಿದ್ದರೂ ಸಹ ಮತ್ತು ಆರೋಪಿಯ ತಪ್ಪಿನಿಂದಲೇ ಸದರಿ ಅಪಘಾತವಾಗಿದ್ದರೂ ಸಹ

ಮತ್ತು ನಾನು ನಿ ಪಿ 3 ರಂತೆ ಪೊಲೀಸರಿಗೆ ಹೇಳಿಕೆ ಕೊಟ್ಟಿದ್ದರೂ ಸಹ ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ವಕೀಲರಿಂದಃಇಲ್ಲ ಎಂದು ನುಡಿದಿರುತ್ತಾರೆ.**

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಾಗಿದೆ.

(ಸಚಿನ್ ಹೆಚ್ . ಆರ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ತಿ.ನರಸೀಪುರ.